ಡಿ. ಡಬ್ಲ್ಯೂ ಃ 1

**<u>ಸಾಕ್ಷಿಗೆ ದಿನಾಂಕ 04.07.2025 ರಂದು ಪ್ರಮಾಣ ವಚನ ನೀಡಲಾಯಿತು.</u>**

**<u>ಮುಂದುವರೆದ ಪಾಟೀಸವಾಲುಃ ವಾದಿ ಪರ ಶ್ರೀ H.P.L ವಕೀಲರಿಂದ</u>**

ಜಮೀನಿನಲ್ಲಿ ಈಗ ಜೋಳ ಬೆಳೆ ಬೆಳೆದಿರುತ್ತೇವೆ. ದಾವಾ ಜಮೀನಿನಲ್ಲಿ ನಾನು ವ್ಯವಸಾಯ ಮಾಡುತ್ತಿದ್ದೇನೆ, ನಾನು ವ್ಯವಸಾಯ ಮಾಡುತ್ತಿದ್ದೇನೆಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಾವಾ ಜಮೀನು ನಮ್ಮ ತಂದೆಯ ಪಿತ್ರಾರ್ಜಿತ ಆಸ್ತಿ ಎಂದರೆ ಸಾಕ್ಷಿ ನಮ್ಮ ಕುಟುಂಬದ ಆಸ್ತಿ ಎಂದು ನುಡಿಯುತ್ತಾರೆ. ದಾವಾ ಜಮೀನಿನಲ್ಲಿ ನನ್ನ ತಂದೆಯ ಅಕ್ಕ-ತಂಗಿಯರು ಹಾಗೂ ಅಣ್ಣ-ತಮ್ಮಂದಿರು ಸಹ ಸಮನಾದ ಹಕ್ಕು ಇದೆ ಎಂದರೆ ಸಾಕ್ಷಿ ಈಗಾಗಲೇ ಭಾಗ ಆಗಿರುತ್ತದೆ ಎಂದು ನುಡಿಯುತ್ತಾರೆ. ಭಾಗ ಆಗಿದೆ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿಲ್ಲ. ನಾನು ಜನಿಸಿದ ನಂತರ ವಿಭಾಗ ಆಗಿರುತ್ತದೆ ಯಾವಾಗ ಆಗಿರುತ್ತದೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನಲ್ಲಿ ನಾನು ಸ್ವಾಧೀನದಲ್ಲಿಲ್ಲ ಹಾಗೂ ಉಳುಮೆ ಮಾಡುತ್ತಿಲ್ಲ ವಾದಿಯ ತಂದೆ ಸ್ವಾಧೀನದಲ್ಲಿದ್ದು ಉಳುಮೆ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ವಾದಿ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.**

**ಓ.ಹೇ.ಕೇ.ಸರಿ ಇದೆ.**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಹುಣಸೂರು.**